33 SCF

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2013-14ನೇ ಸಾಲಿನ RIDF-19 ರಡಿಯಲ್ಲಿ ರೈತ ಸಂಪರ್ಕ ಕೇಂದ್ರಗಳ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವೆಲಪ್‌ಮೆಂಟ್ ಲಿಮಿಟೆಡ್ (KRIDL) ಗೆ ವಹಿಸಲು ಅನುಮತಿ ಹಾಗೂ ಅನುದಾನ ಬಿಡುಗಡೆಗೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ:
1. NABARD ಸಂಸ್ಥೆಯ ಪತ್ರ ಸಂ: NB/SPD/RIDF-19(Karnataka RO)/140 PSC/2014-15, ದಿ: 21-05-2014.
2. ಸರ್ಕಾರದ ಆದೇಶ ಸಂ: ಕೃಇ/66/ಕೃಯೋಕಾ/2013, ದಿ: 21-04-2014.
3. ಸರ್ಕಾರದ ಆದೇಶ ಸಂ:ಕೃಇ/48/ಕೃಯೋಕಾ/2014, ದಿ: 09-05-2014.
4. ಸರ್ಕಾರದ ಆದೇಶ ಸಂ: ಕೃಇ/118/ಕೃಯೋಕಾ/2010(ಭಾ-2), ದಿ: 20-03-2014.
5. ಸರ್ಕಾರದ ತಿದ್ದುಪಡಿ ಆದೇಶ ಸಂ:ಕೃಇ/102/ಕೃಯೋಕಾ/2012(ಭಾ-1), ದಿ: 20-03-2014.
6. ಕೃಷಿ ಆಯುಕ್ತರ ಪತ್ರ ಸಂ:ರೈ.ಸಂ.ಕೇಂ/ತಾ-2/ಆರ್.ಐ.ಡಿ.ಎಫ್-19/07/13-14, ದಿ: 27-05-2014.

## ಪ್ರಸ್ತಾವನೆ:

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ಪತ್ರದಲ್ಲಿ NABARD ಸಂಸ್ಥೆಯು 2013-14ನೇ ಸಾಲಿನ ಆರ್.ಐ.ಡಿ.ಎಫ್-19ನೇ ಟ್ರಂಚ್ ರಡಿಯಲ್ಲಿ 60 ರೈತ ಸಂಪರ್ಕ ಕೇಂದ್ರಗಳನ್ನು ನಿರ್ಮಿಸಲು ರೂ.24.60 ಕೋಟಿ ಅನುದಾನವನ್ನು ಮಂಜೂರು ಮಾಡಿರುತ್ತದೆ. ಅದರಲ್ಲಿ ರೂ.23.37 ಕೋಟಿ ನಬಾರ್ಡ್‌ನಿಂದ ಸಾಲ ಮತ್ತು ರೂ.1.435 ಕೋಟಿ ರಾಜ್ಯ ಸರ್ಕಾರದ ವಂತಿಕೆಯಾಗಿರುತ್ತದೆ.

ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯ ಸರ್ಕಾರವು 60 ರೈತ ಸಂಪರ್ಕ ಕೇಂದ್ರಗಳನ್ನು ಲೆಕ್ಕ ಶೀರ್ಷಿಕೆ:4401-00-001-1-01 (436) ರಡಿಯಲ್ಲಿ ರೂ.24.805 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಮೇಲೆ ಕ್ರಮಾಂಕ (3) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2014-15ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ: 4401-00-001-1-01 ರಡಿಯಲ್ಲಿ ರೂ.28.30 ಕೋಟಿ ಅನುದಾನ ಕಲ್ಪಿಸಲಾಗಿರುತ್ತದೆ. ಅದರಲ್ಲಿ ಮೊದಲನೇ ಕಂತಿನ ಅನುದಾನ ರೂ.7.075 ಕೋಟಿಗಳನ್ನು ಈಗಾಗಲೇ ಸರ್ಕಾರವು ಬಿಡುಗಡೆ ಮಾಡಲಾಗಿದೆ.

ಮೇಲೆ ಕ್ರಮಾಂಕ (4 ಮತ್ತು 5) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಆರ್.ಐ.ಡಿ.ಎಫ್-17 ಮತ್ತು 18ರ ಟ್ರಂಚ್ ಅಡಿಯಲ್ಲಿ ಮಂಜೂರಾದ ರೈತ ಸಂಪರ್ಕ ಕೇಂದ್ರಗಳ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (KRIDL) ಗೆ ವಹಿಸಲು ಮತ್ತು ರೈತ ಸಂಪರ್ಕ ಕೇಂದ್ರಗಳಿಗೆ ನಿವೇಶನಗಳನ್ನು ಖರೀದಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಾಹಣಾ ಅಧಿಕಾರಿಗಳು (CEO) ತಾಲ್ಲೂಕು ತಹಸೀಲ್ದಾರರು, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳನ್ನು ಸದಸ್ಯರನ್ನಾಗಿ ಹಾಗೂ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರನ್ನು ಸದಸ್ಯ ಕಾರ್ಯದರ್ಶಿಗಳನ್ನಾಗಿ ನೇಮಿಸಿ ಸರ್ಕಾರವು ಆದೇಶಿಸಿದೆ.

ಈ ಹಿನ್ನೆಲೆಯಲ್ಲಿ ಮೇಲೆ ಕ್ರಮಾಂಕ (6) ರಲ್ಲಿ ಓದಲಾದ ಕೃಷಿ ನಿರ್ದೇಶಕರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಆರ್.ಐ.ಡಿ.ಎಫ್-19 (2013-14) ಯೋಜನೆಯಡಿ ಮಂಜೂರಾದ 60 ರೈತ ಸಂಪರ್ಕ ಕೇಂದ್ರ ಕಟ್ಟಡ ನಿರ್ಮಾಣ (5 ನಿವೇಶನ ಖರೀದಿ ಸೇರಿದಂತೆ) ಕಾಮಗಾರಿಗಳನ್ನು ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವೆಲಪ್‌ಮೆಂಟ್ ಲಿಮಿಟೆಡ್ (KRIDL) ಗೆ ವಹಿಸಲು ಮತ್ತು ರೈತ ಸಂಪರ್ಕ ಕೇಂದ್ರಗಳಿಗೆ ನಿವೇಶನಗಳನ್ನು ಖರೀದಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಾಹಣಾ ಅಧಿಕಾರಿಗಳು (CEO) ತಾಲ್ಲೂಕು ತಹಸೀಲ್ದಾರರು, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳನ್ನು ಸದಸ್ಯರನ್ನಾಗಿ ಹಾಗೂ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರನ್ನು ಸದಸ್ಯ ಕಾರ್ಯದರ್ಶಿಗಳನ್ನಾಗಿ ನೇಮಿಸಿ ಸಮಿತಿ ರಚಿಸಲು ಸರ್ಕಾರದ ಆದೇಶ ಹೊರಡಿಸಲು ಕೋರಿರುತ್ತಾರೆ.

ಕೃಷಿ ನಿರ್ದೇಶಕರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ/66/ಕೃಯೋಕೇ/2013, ಬೆಂಗಳೂರು,**
**ದಿನಾಂಕ: 16-08-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಆರ್.ಐ.ಡಿ.ಎಫ್-19 (2013-14) ಯೋಜನೆಯಡಿ ಮಂಜೂರಾದ 60 ರೈತ ಸಂಪರ್ಕ ಕೇಂದ್ರ ಕಟ್ಟಡ ನಿರ್ಮಾಣ (5 ನಿವೇಶನ ಖರೀದಿ ಸೇರಿದಂತೆ) ಕಾಮಗಾರಿಗಳನ್ನು ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವೆಲಪ್‌ಮೆಂಟ್ ಲಿಮಿಟೆಡ್ (KRIDL) ಗೆ ವಹಿಸಲು ಸರ್ಕಾರವು ಆದೇಶಿಸಿದೆ.

ರೈತ ಸಂಪರ್ಕ ಕೇಂದ್ರಗಳಿಗೆ ನಿವೇಶನಗಳನ್ನು ಖರೀದಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಾಹಣಾ ಅಧಿಕಾರಿಗಳು (CEO) ತಾಲ್ಲೂಕು ತಹಸೀಲ್ದಾರರು, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳನ್ನು ಸದಸ್ಯರನ್ನಾಗಿ ಹಾಗೂ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರನ್ನು ಸದಸ್ಯ ಕಾರ್ಯದರ್ಶಿಗಳನ್ನಾಗಿ ನೇಮಿಸಿ ಸಮಿತಿ ರಚಿಸಲು ಸಹ ಸರ್ಕಾರವು ಮಂಜೂರಾತಿ ನೀಡಿದೆ.

ಇದಕ್ಕೆ ತಗಲುವ ವೆಚ್ಚವನ್ನು 2014-15ನೇ ಸಾಲಿನ ರಾಜ್ಯ ಯೋಜನೆಗಳು ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ:4401-00-001-1-01 ಉಪ ಶೀರ್ಷಿಕೆ: 436 ರಡಿಯಲ್ಲಿ ಭರಿಸತಕ್ಕದ್ದು. ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (KRIDL) ಸಂಸ್ಥೆಯು ಈ ಸಂಬಂಧ ಸಲ್ಲಿಸುವ Grant –in Aid ಬಿಲ್ಲಿಗೆ ಮೇಲು ಸಹಿ ಮಾಡುವ ಅಧಿಕಾರವನ್ನು ಕೃಷಿ ನಿರ್ದೇಶಕರಿಗೆ ನೀಡಿದೆ.

ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (KRIDL) ಸಂಸ್ಥೆಗೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ) ರಡಿ ಎಲ್ಲಾ ತರಹದ ಕಟ್ಟಡಗಳ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ದಿ: 01-04-2014 ರಿಂದ ಒಂದು ವರ್ಷದ ಅವಧಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿರುವುದರಿಂದ ಅದರಂತೆ ಕ್ರಮ ಕೈಗೊಳ್ಳಲು ಸಹ ಆದೇಶಿಸಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಜ್ಯೋತಿ.ಆರ್.ಜೆ),**
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಕೃಷಿ ಇಲಾಖೆ (ಯೋಜನೆ).**

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ಮತ್ತು ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು-01.

2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು-01.
3. ನಿರ್ದೇಶಕರು, ಯೋಜನಾ ಕಾರ್ಯಕ್ರಮ (Project Formulation Division), ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (KRIDL) (ಕೃಷಿ ನಿರ್ದೇಶಕರ ಮುಖಾಂತರ)
6. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ.
9. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕ, ಕೃಷಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕರು, ಕೃಷಿ, ತೋಟಗಾರಿಕೆ ಇಲಾಖೆ.ಬೆಂಗಳೂರು
11. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.